# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 175 | Pages. 2 | Date: 19-06-2026, FRIDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 175 – ಪುಟಗಳು : 2 | 19-06-2026 ಶುಕ್ರವಾರ | Ph: 8762954248 | ದರ : ₹1


# ಬಡವರನ್ನು ಹೊರದೂಡಲು ಎಸ್‌ಐಆರ್

## ಸಿಪಿಐ ರಾಜ್ಯ ಕಾರ್ಯದರ್ಶಿ ವಿಮಲ ಆತಂಕ | ಹಾಸನದಲ್ಲಿ ದುಂಡು ಮೇಜಿನ ಸಭೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭಾರತೀಯ ಚುನಾವಣಾ ಆಯೋಗವು ಜಾರಿಗೆ ತರುತ್ತಿರುವ ಎಸ್‌ಐಆರ್ ಪ್ರಜಾಪ್ರಭುತ್ವದ ಆಶಯಗಳಿಗೆ ಮಾರಕವಾಗಿದೆ, ಬಡವರು, ದಲಿತರು, ಶ್ರಮಿಕರು ಮತ್ತು ಮಹಿಳೆಯರನ್ನು ವ್ಯವಸ್ಥಿತವಾಗಿ ಹೊರತಳ್ಳಲಾಗುತ್ತಿದೆ ಎಂದು ಸಿಪಿಐ ರಾಜ್ಯ ಕಾರ್ಯದರ್ಶಿ ಮಂಡಳಿ ಸದಸ್ಯೆ ಕೆ.ಎಸ್. ವಿಮಲ ಆತಂಕ ವ್ಯಕ್ತಪಡಿಸಿದರು.

ನಗರದಲ್ಲಿ ಆಯೋಜಿಸಿದ್ದ ದುಂಡು ಮೇಜಿನ ಸಭೆಯಲ್ಲಿ 'ಹೊರತಳ್ಳಲ್ಪಡುತ್ತಿರುವ ಮತದಾರರು ಮತ್ತು ಚುನಾವಣಾ ಆಯೋಗದ ನೀತಿಗಳು' ವಿಷಯ ಕುರಿತು ಮಾತನಾಡಿದ ಅವರು, ಎಸ್‌ಐಆರ್ ಪ್ರಕ್ರಿಯೆಗೆ ಸಂವಿಧಾನದಲ್ಲಿ ಅವಕಾಶವಿಲ್ಲ. ಇದು ಸಂಪೂರ್ಣ ಅಸಂವಿಧಾನಿಕ ಎಂದು ನಾವು ಮೊದಲಿನಿಂದಲೂ ವಾದಿಸುತ್ತಿದ್ದೆವು. ಸಂವಿಧಾನದ ವಿಧಿಗಳಾದ 324 ರಿಂದ 327ರ ವರೆಗಿನ ಅಂಶಗಳು ಏನನ್ನು ಹೇಳುತ್ತವೆ ಎಂಬುದನ್ನು ಕಾನೂನು ತಜ್ಞರ ಮೂಲಕ ವಿಶ್ಲೇಷಿಸಿದ್ದೆವು. ಆದರೆ, ಮೇ 27 ರಂದು ಬಂದ ಸುಪ್ರೀಂ ಕೋರ್ಟ್ ತೀರ್ಪು ಚುನಾವಣಾ ಆಯೋಗದ ಈ ನಡೆಗೆ ಹಸಿರು ನಿಶಾನೆ ತೋರಿದೆ. ಅದು ಆಡಳಿತ ವ್ಯವಸ್ಥೆಗೆ ಅನುಕೂಲಕರವಾಗಿದ್ದರೆ, ದೇಶದ ಬಹುಸಂಖ್ಯಾತ ದುಡಿಯುವ ವರ್ಗ, ಬಡವರು, ಕೂಲಿ ಕಾರ್ಮಿಕರು, ದಲಿತರು, ಮಹಿಳೆಯರು ಮತ್ತು ಅಲ್ಪಸಂಖ್ಯಾತರಿಗೆ ಇದು ಅಪಾಯದ ಮುನ್ಸೂಚನೆಯಾಗಿ ಮಾರ್ಪಟ್ಟಿದೆ ಎಂದರು.

ನಮ್ಮದು ಸಾರ್ವತ್ರಿಕ ಚುನಾವಣಾ ವ್ಯವಸ್ಥೆ. 18 ವರ್ಷ ತುಂಬಿದ ಪ್ರತಿಯೊಬ್ಬ ನಾಗರಿಕನಿಗೂ ಲಿಂಗ, ಧರ್ಮ, ಜಾತಿ, ಭಾಷೆಯ ತಾರತಮ್ಯವಿಲ್ಲದೆ ಮತದಾನದ ಹಕ್ಕನ್ನು ಸಂವಿಧಾನ ಖಾತರಿಪಡಿಸಿದೆ. ಆದರೆ ಇಂದಿನ ಪರಿಸ್ಥಿತಿ ಬದಲಾಗಿದೆ.



ಹಿಂದೆ ದೇಶದ ಮತದಾರರು ತಮಗೆ ಬೇಕಾದ ಸರ್ಕಾರವನ್ನು ಆರಿಸುತ್ತಿದ್ದರು, ಆದರೆ ಈಗ ಸರ್ಕಾರ ನಡೆಸುವ ಪಕ್ಷಗಳು ತಮಗೆ ಬೇಕಾದ ಮತದಾರರನ್ನು ಆಯ್ಕೆ ಮಾಡಿಕೊಳ್ಳುತ್ತಿವೆ ಎಂದು ಆರೋಪಿಸಿದರು.

ಆಯೋಗವು ಕೇಳುತ್ತಿರುವ 11 ದಾಖಲೆಗಳು ದೇಶದ ಸಾಮಾನ್ಯ, ಜನಸಾಮಾನ್ಯರ ಬಳಿ ಇರಲು ಸಾಧ್ಯವೇ ಇಲ್ಲ. ವಲಸೆ ಕಾರ್ಮಿಕರು, ತೀರಾ ಬಡವರು ಮತ್ತು ಶಿಕ್ಷಣ ವಂಚಿತರ ಬಳಿ ಇಂತಹ ದಾಖಲೆಗಳು ಸಿಗುವುದಿಲ್ಲ. ಸ್ವತಃ ಚುನಾವಣಾ ಆಯೋಗ ನೀಡಿದ ಟಿವೋಟರ್ ಐಡಿಟಿ ಮತ್ತು ದೇಶದ ಕಡ್ಡಾಯ ದಾಖಲೆಯಾದ ಟಿಆಧಾರ್ ಕಾರ್ಡ್‌ಟಿಗಳನ್ನೇ ಪೌರತ್ವ ಅಥವಾ ಮತದಾನದ ಅರ್ಹತೆಗೆ ಮಾನ್ಯ ಮಾಡುತ್ತಿಲ್ಲ. ಮದುವೆಯಾಗಿ ಬೇರೊಂದು ಊರಿಗೆ ಹೋಗುವ ಮಹಿಳೆಯರು ತಮ್ಮ ತಂದೆ-ತಾಯಿಯ ದಾಖಲೆಗಳನ್ನು ಒದಗಿಸಲಾಗದೆ ಮತದಾನದ ಹಕ್ಕಿನಿಂದ

> ಚುನಾವಣಾ ಆಯೋಗವು ಮತದಾರರ ಪಟ್ಟಿಯ ಟಿಶುದ್ಧೀಕರಣಟಿ (ಮರಣ ಹೊಂದಿದವರ, ದ್ವಿಪ್ರತಿ ಇರುವವರ ಹೆಸರು ತೆಗೆಯುವುದು) ಮಾಡುತ್ತಿದ್ದೇವೆ ಎಂದು ಹೇಳಿಕೊಳ್ಳುತ್ತಿದೆ. ಆದರೆ, ಈ ಶುದ್ಧೀಕರಣದ ಅಡಿಯಲ್ಲಿ ಧ್ವನಿ ಇಲ್ಲದವರನ್ನು, ಆಸ್ತಿ ಮತ್ತು ಶಿಕ್ಷಣ ಇಲ್ಲದವರನ್ನು ಪಟ್ಟಿಯಿಂದ ಹೊರಗಿಡಲಾಗುತ್ತಿದೆ.
>
> **– ಕೆ.ಎಸ್.ವಿಮಲ, ಪ್ರಗತಿಪರ ಚಿಂತಕಿ**

ವಂಚಿತರಾಗುತ್ತಿದ್ದಾರೆ. ಮತದಾರರನ್ನು ಚುನಾವಣಾ ಪ್ರಕ್ರಿಯೆಯಿಂದ ಹೊರದಬ್ಬಲು ಆಯೋಗವು ಟಿತಾತ್ವಿಕ ವ್ಯತ್ಯಾಸಟಿ ಅಥವಾ ಅಸಂಗತ ವಿವರಗಳ ನೆಪವನ್ನು ಬಳಸಿಕೊಳ್ಳುತ್ತಿದೆ. ಹೆಸರುಗಳ ಉಚ್ಚಾರಣೆಯಲ್ಲಿನ ಸಣ್ಣ ವ್ಯತ್ಯಾಸ, ಬದಲಾವಣೆ ಅಥವಾ ತಾಯಿ ಮತ್ತು ಮಗುವಿನ ವಯಸ್ಸಿನ ನಡುವಿನ ತಾಂತ್ರಿಕ ವ್ಯತ್ಯಾಸಗಳನ್ನು ಮುಂದಿಟ್ಟುಕೊಂಡು ಮತದಾರರನ್ನು ಪಟ್ಟಿಗೆ ಸೇರಿಸಿ, ಅಂತಿಮವಾಗಿ ಅವರ ಹೆಸರುಗಳನ್ನು ಕೈಬಿಡಲಾಗುತ್ತಿದೆ. ತಂತ್ರಜ್ಞಾನ ಮುಂದುವರಿದಿರುವ ಈ ಕಾಲದಲ್ಲಿ ಇಂತಹ ಸಣ್ಣ ತಪ್ಪುಗಳನ್ನು ಸರಿಪಡಿಸುವ ಬದಲು ಇಡೀ ಮತದಾರರನ್ನೇ ಸಂಶಯದಿಂದ ನೋಡುವುದು ಎಷ್ಟು ಸರಿ ಎಂದು ಪ್ರಶ್ನಿಸಿದರು.

ಎಸ್‌ಐಆರ್ ಹೆಸರಿನಲ್ಲಿ ಬಿಹಾರದಲ್ಲಿ 65 ಲಕ್ಷ ಜನರ ಮತದಾನದ ಹಕ್ಕು ಕಸಿದುಕೊಳ್ಳಲಾಯಿತು.

ಪಶ್ಚಿಮ ಬಂಗಾಳದಲ್ಲಿ ಮುಸ್ಲಿಂ ಅಲ್ಪಸಂಖ್ಯಾತರನ್ನು ಗುರಿಯಾಗಿಸಿ ಹೊರತಳ್ಳುವ ಪ್ರಕ್ರಿಯೆ ಆರಂಭವಾಯಿತಾದರೂ ಅಂತಿಮವಾಗಿ ಲಕ್ಷಾಂತರ ಬಡ ಹಿಂದೂಗಳೂ ಕೂಡ ಮತದಾನದ ಹಕ್ಕನ್ನು ಕಳೆದುಕೊಂಡಿದ್ದಾರೆ.

ದೇಶದ ಹೆಮ್ಮೆಯ ನೊಬೆಲ್ ಪ್ರಶಸ್ತಿ ವಿಜೇತ ಅಮರ್ತ್ಯ ಸೇನ್ ಅವರ ಹೆಸರೇ ಟಿಡೌಟ್‌ಫುಲ್ ಸಿಟಿಜನ್‌ಟಿ ಪಟ್ಟಿಗೆ ಸೇರುವಂತಾಗಿದ್ದು ಈ ವ್ಯವಸ್ಥೆಯ ಅಣಕವಾಗಿದೆ.

ಕರ್ನಾಟಕದಲ್ಲಿ ಈಗಾಗಲೇ ಟಿಮ್ಯಾಪಿಂಗ್ ಮತ್ತು ಮ್ಯಾಚಿಂಗ್‌ಟಿ ಪ್ರಕ್ರಿಯೆ ಆರಂಭವಾಗಿದ್ದು, ಮೊದಲ ಹಂತದಲ್ಲೇ ಸುಮಾರು 1 ಕೋಟಿ 10 ಲಕ್ಷ ಜನರ ಹೆಸರು ಮ್ಯಾಪ್ ಆಗಿಲ್ಲ ಎಂದು ಸ್ವತಃ ರಾಜ್ಯ ಚುನಾವಣಾ ಆಯುಕ್ತರು ಒಪ್ಪಿಕೊಂಡಿದ್ದಾರೆ.

ಇದು ಉದ್ದೇಶಪೂರ್ವಕ ಕೃತ್ಯವಲ್ಲದೇ ಮತ್ತೇನು ಎಂದು ಅವರು ಪ್ರಶ್ನಿಸಿದರು.

ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಹೆಚ್.ಆರ್. ನವೀನ್‌ಕುಮಾರ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿಪಿಐಎಂ ಜಿಲ್ಲಾಧ್ಯಕ್ಷ ಧರ್ಮೇಶ್ ಅಧ್ಯಕ್ಷತೆ ವಹಿಸಿದ್ದರು, ಎಂ.ಜಿ.ಪೃಥ್ವಿ, ಪತ್ರಕರ್ತ ಆರ್.ಪಿ.ವೆಂಕಟೇಶ್‌ಮೂರ್ತಿ, ಎಂ.ಸಿ.ಡೋಂಗ್ರೆ, ಟಿ.ಆರ್.ವಿಜಯಕುಮಾರ್, ಕಾಡಯ್ಯ, ಅನ್‌ಷದ್ ಪಾಳ್ಯ, ಕಿಶೋರ್ ಕುಮಾರ್, ಪರಮಶಿವಯ್ಯ, ಚಲಂ ಹಾಡ್ಲಹಳ್ಳಿ, ರಾಜಶೇಖರ್ ಹುಲಿಕಲ್, ಈರೇಶ್ ಹಿರೇಹಳ್ಳಿ, ಅಂಬುಗ ಮಲ್ಲೇಶ್, ಆರಿಫ್ ಕರ್ಲೆ, ಸಮೀರ್, ಮುಬಶಿರ್ ಅಹಮದ್, ಹರೀಶ್ ಕಟ್ಟೆ, ತೌಫಿಕ್ ಅಹಮದ್, ಅನ್ಸರ್, ಅರವಿಂದ ಮತ್ತಿತರರಿದ್ದರು.

### ಮುಂದಿನ ಹೋರಾಟದ ಹಾದಿ

ಈ ಗಂಭೀರ ಪರಿಸ್ಥಿತಿಯನ್ನು ಎದುರಿಸಲು ನಾಗರಿಕ ಸಮಾಜ ಮತ್ತು ರಾಜಕೀಯ ಪಕ್ಷಗಳು ತಕ್ಷಣವೇ ಜಾಗೃತರಾಗಬೇಕಿದೆ. ಸರ್ಕಾರವು ನಮಗೆ ಬೇರೆಲ್ಲಾ ಗ್ಯಾರಂಟಿಗಳನ್ನು ನೀಡುತ್ತಿರುವಂತೆ ಮತದಾನ ಹಕ್ಕಿನ ಗ್ಯಾರಂಟಿ ನೀಡಬೇಕು. ಪ್ರತಿ ಬೂತ್ ಮಟ್ಟದಲ್ಲಿ ಆಯೋಗವು ಸಹಾಯ ಕೇಂದ್ರಗಳನ್ನು ತೆರೆದು ಸಾಮಾನ್ಯ ಜನರಿಗೆ ಅಗತ್ಯ ದಾಖಲೆಗಳನ್ನು ಒದಗಿಸಲು ಸಹಾಯ ಮಾಡಬೇಕು. ಪ್ರತಿಯೊಬ್ಬ ನಾಗರಿಕನೂ ತನ್ನ ಮತದಾನದ ಹಕ್ಕು ಸುರಕ್ಷಿತವಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ವ್ಯಾಪಕವಾದ ಜನಚಳವಳಿ ರೂಪಿಸಬೇಕಿದೆ. ಈಗ ಮೈಮರೆತರೆ ಪ್ರಜಾಪ್ರಭುತ್ವಕ್ಕೆ ಉಳಿಗಾಲವಿಲ್ಲ ಎಂಬುದನ್ನು ಎಲ್ಲರೂ ಮನಗಾಣಬೇಕೆಂದರು. ದುಂಡು ಮೇಜಿನ ಸಭೆಯ ನಿರ್ಣಯಗಳನ್ನು ಜೂ. 22ರಂದು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರಿಗೆ ಸಲ್ಲಿಸಲು ನಿರ್ಧರಿಸಲಾಯಿತು.

---

# IFWJ ರಾಷ್ಟ್ರೀಯ ಮಂಡಳಿಗೆ ಜಿಲ್ಲೆಯ ಪತ್ರಕರ್ತರ ನೇಮಕ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ದೆಹಲಿಯ ಭಾರತೀಯ ಕಾರ್ಯನಿರತ ಪತ್ರಕರ್ತರ ಒಕ್ಕೂಟದ ರಾಷ್ಟ್ರೀಯ ಮಂಡಳಿ ಸದಸ್ಯರನ್ನಾಗಿ ಜಿಲ್ಲೆಯ ಹಲೋ ಹಾಸನ್ ಪತ್ರಿಕೆ ಸಂಪಾದಕ ರವಿ ನಾಕಲಗೂಡು, ಭೀಮ ವಿಜಯ ಪತ್ರಿಕೆ ಸಂಪಾದಕ ಹೆತ್ತೂರು ನಾಗರಾಜ್ ಮತ್ತು ಮಾರ್ಗಪ್ರಭ ಸಂಪಾದಕ ಟಿ.ಎ. ಶ್ರೀನಿಧಿ ಅವರನ್ನು ನೇಮಕ ಮಾಡಲಾಗಿದೆ.

ರಾಷ್ಟ್ರೀಯ ಅಧ್ಯಕ್ಷ ಬಿ.ವಿ.ಮಲ್ಲಿಕಾರ್ಜುನಯ್ಯ ಅವರ ಮಾರ್ಗದರ್ಶನದಲ್ಲಿ ಸಂಘಟನೆಯ ಚಟುವಟಿಕೆಯಲ್ಲಿ ಭಾಗವಹಿಸಿ ರಾಜ್ಯದ ಪತ್ರಕರ್ತರ ಸಮಸ್ಯೆಗಳ ಕುರಿತು ರಾಷ್ಟ್ರಮಟ್ಟದಲ್ಲಿ ಚರ್ಚಿಸಿ ಪರಿಹಾರ ಕಂಡುಕೊಳ್ಳುವಲ್ಲಿ ಕಾರ್ಯ ನಿರ್ವಹಿಸಿ ಎಂದು ಒಕ್ಕೂಟದ ಮಹಾ ಪ್ರಧಾನ ಕಾರ್ಯದರ್ಶಿ ಪರಮಾನಂದ ಪಾಂಡೆ ಅವರು ತಿಳಿಸಿದ್ದಾರೆ.

ಜಿಲ್ಲೆಯ ಮೂವರು ಪತ್ರಕರ್ತರ ಆಯ್ಕೆಗೆ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ ಹಾಗು ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್.ಪ್ರಮೋದ್, ಸಂಘದ ಎಲ್ಲಾ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು ಅಭಿನಂದನೆ ಸಲ್ಲಿಸಿದ್ದಾರೆ.

---

# ಮನುಷ್ಯನ ಬದುಕಿಗೆ ಪ್ರಕೃತಿ ಅವಶ್ಯಕತೆ ಹೆಚ್ಚಿದೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಭೂಮಿಗೆ ಮನುಷ್ಯನ ಅಗತ್ಯವಿಲ್ಲದಿದ್ದರೂ ಮನುಷ್ಯನ ಬದುಕಿಗೆ ಭೂಮಿ ಅತ್ಯಗತ್ಯವಾಗಿದೆ. ಪರಿಸರವನ್ನು ಉಳಿಸಿಕೊಳ್ಳುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ ಎಂದು ಹಸಿರು ಭೂಮಿ ಪ್ರತಿಷ್ಠಾನದ ಅಧ್ಯಕ್ಷ ವೈ.ಎನ್.ಸುಬ್ಬಸ್ವಾಮಿ ಸಲಹೆ ನೀಡಿದರು.

ನಗರದ ಶ್ರೀ ಕುವೆಂಪು ಮಹಿಳಾ ಸಂಘದಿಂದ ಆಯೋಜಿಸಿದ್ದ ವಿಶ್ವ ಪರಿಸರ ದಿನಾಚರಣೆಯಲ್ಲಿ ಮಾತನಾಡಿದ ಅವರು, ಇಂದಿನ ದಿನಗಳಲ್ಲಿ ಏರುತ್ತಿರುವ ತಾಪಮಾನ, ಕುಸಿಯುತ್ತಿರುವ ಅಂತರ್ಜಲ ಮಟ್ಟ ಹಾಗೂ ಪರಿಸರ ಅಸಮತೋಲನಕ್ಕೆ ಮಾನವ ಚಟುವಟಿಕೆಗಳೇ ಕಾರಣವಾಗಿವೆ. ಈ ಸಮಸ್ಯೆಗೆ ಶಾಶ್ವತ ಪರಿಹಾರವೆಂದರೆ ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಟ್ಟು ಅವುಗಳನ್ನು ಸಂರಕ್ಷಿಸುವುದು ಹಾಗು ನೀರಿನ ಮೂಲ ಪುನರುಜ್ಜೀವನಗೊಳಿಸುವುದಾಗಿದೆ ಎಂದು ಹೇಳಿದರು.

ಹಾಸನದಲ್ಲಿ ಪರಿಸರ ಸಂರಕ್ಷಣೆಗೆ ಹಸಿರುಭೂಮಿ ಪ್ರತಿಷ್ಠಾನ 2017 ರಿಂದ ಕಾರ್ಯನಿರ್ವಹಿಸುತ್ತಿದೆ. ಸುಮಾರು 11 ಕೆರೆ ಮತ್ತು 25 ಕಲ್ಯಾಣಿಗಳನ್ನು ಪುನಶ್ಚೇತನಗೊಳಿಸಲಾಗಿದೆ. ಜೊತೆಗೆ 36 ವಿವಿಧ ಜಾತಿಯ 5,000 ಗಿಡಗಳನ್ನು ನೆಟ್ಟು ಪೋಷಣೆ ಮಾಡಲಾಗಿದೆ.

2020-21ನೇ ಸಾಲಿನಲ್ಲಿ ಹಾಸನದ ಕೇಂದ್ರೀಯ ವಿದ್ಯಾಲಯದ 20 ಗುಂಟೆ ಪ್ರದೇಶದಲ್ಲಿ ಹಸಿರು ಭೂಮಿ ಪ್ರತಿಷ್ಠಾನದ ಸಹಯೋಗದೊಂದಿಗೆ 29 ವಿವಿಧ ಜಾತಿಯ 1,000 ಗಿಡಗಳನ್ನು ನೆಟ್ಟು ಮಿಯಾವಕಿ ಮಾದರಿಯ ಅರಣ್ಯ ನಿರ್ಮಿಸಲಾಗಿದೆ. ಈ ಯೋಜನೆ ಜಿಲ್ಲೆಯ ಪರಿಸರ ಸಂರಕ್ಷಣೆಗೆ ಮಾದರಿಯಾಗಿದ್ದು, ನಗರ ಪ್ರದೇಶದಲ್ಲಿ ಹಸಿರು ವಾತಾವರಣ ನಿರ್ಮಿಸುವಲ್ಲಿ ಯಶಸ್ವಿಯಾಗಿದೆ ಎಂದು ಹೇಳಿದರು.

ಮಹಾತ್ಮ ಗಾಂಧಿ ಉದ್ಯಾನವನ ಹಾಗು ರಿಂಗ್ ರಸ್ತೆಯ 400 ಮೀಟರ್ ರಸ್ತೆ ವಿಭಜಕದಲ್ಲಿ ನೆಟ್ಟಿರುವ ಗಿಡಗಳ ನಿರ್ವಹಣೆ, ದೊಡ್ಡಕೊಂಡಗೊಳದ ಗುಂಡು ತೋಪಿನಲ್ಲಿ ವಿವಿಧ ಜಾತಿಯ ಸಸಿಗಳನ್ನು ನೆಟ್ಟು ಸಂರಕ್ಷಣೆ ಮಾಡುವ ಕಾರ್ಯಗಳನ್ನು ಪ್ರತಿಷ್ಠಾನ ನಿರಂತರವಾಗಿ ಕೈಗೊಂಡಿದೆ ಎಂದು ತಿಳಿಸಿದರು.

---

# ಅರಕಲಗೂಡು ಪಪಂ ಮೇಲ್ದರ್ಜೆಗೇರಿಸುವ ಭರವಸೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಅರಕಲಗೂಡು ಪಟ್ಟಣ ಪಂಚಾಯಿತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೆ ಏರಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಸಂಸದ ಶ್ರೇಯಸ್ ಪಟೇಲ್ ಭರವಸೆ ನೀಡಿದರು.

ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಗುರುವಾರ ಚಾಲನೆ ನೀಡಿ ಮಾತನಾಡಿದ ಅವರು, ಈ ಕುರಿತು ಈಗಾಗಲೇ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದ್ದು ಮಾನದಂಡ ಹಾಗೂ ಮಾರ್ಗಸೂಚಿಗಳ ಪರಿಶೀಲನೆ ನಡೆಸಲಾಗುತ್ತಿದೆ. ಮುಂಬರುವ ಬಜೆಟ್ ಒಳಗೆ ಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಅಗತ್ಯ ಕ್ರಮ ಕೈಗೊಳ್ಳುವುದಾಗಿ ಹೇಳಿದರು.

ಹಿಂದಿನ ಸಮಾಜ ಕಲ್ಯಾಣ ಇಲಾಖೆ ಸಚಿವ ಹೆಚ್.ಸಿ. ಮಹದೇವಪ್ಪ ಅವರಿಗೆ ಪಟ್ಟಣದ ದಲಿತರು ವಾಸಿಸುವ ವಾರ್ಡ್‌ಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿರುವ ಬಗ್ಗೆ ಮನವಿ ಸಲ್ಲಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ಸಚಿವರು ಪ್ರತಿ ವಾರ್ಡ್‌ಗೆ ತಲಾ 10 ಲಕ್ಷ ರೂಪಾಯಿಗಳ ಅನುದಾನವನ್ನು ಮಂಜೂರು ಮಾಡಿದ್ದು ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಮುಂದಿನ ದಿನಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳುವುದಾಗಿ ಹೇಳಿದರು. ಪಟ್ಟಣದಲ್ಲಿ ಉತ್ತಮವಾಗಿದ್ದ ರಸ್ತೆಗಳನ್ನು ಯುಜಿಡಿ ಹಾಗೂ ಜೆಜೆಎಂ ಯೋಜನೆಗಳಿಗಾಗಿ ಅಗೆದು ತಿಂಗಳುಗಳೇ ಕಳೆದರೂ ಸಮರ್ಪಕವಾಗಿ ದುರಸ್ತಿ ಮಾಡದಿರುವ ಬಗ್ಗೆ ಸುದ್ದಿಗಾರರ ಪ್ರಶ್ನೆಗೆ ಎಲ್ಲೆಲ್ಲಿ ರಸ್ತೆಗಳು ಗುಂಡಿ ಬಿದ್ದಿವೆಯೋ, ಅಲ್ಲಿ ತಕ್ಷಣವೇ ಸಾರ್ವಜನಿಕರಿಗೆ ತೊಂದರೆಯಾಗದಂತೆ ಆದಷ್ಟು ಬೇಗ ರಸ್ತೆ ದುರಸ್ತಿ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದರು.



ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಪಿ.ಶ್ರೀಧರ್ ಗೌಡ, ತಹಸೀಲ್ದಾರ್ ಕೆ.ಸಿ. ಸೌಮ್ಯ, ಪಪಂ ಮುಖ್ಯಾಧಿಕಾರಿ ನಾಗೇಂದ್ರ ಕುಮಾರ್, ತಾಲ್ಲೂಕು ಕಾಂಗ್ರೆಸ್ ಅಧ್ಯಕ್ಷ ಸೋಮಶೇಖರ್, ಮುಖಂಡರಾದ ಬಿ.ಸಿ.ರಾಜೇಶ್, ಗಣೇಶ್ ವೇಲಾಪುರಿ, ಚಂದ್ರಪ್ಪ, ಲಿಂಗರಾಜ್, ಮಹೇಶ್, ಚಂದ್ರು ಉಪಸ್ಥಿತರಿದ್ದರು.

---

# ಸಂವಿಧಾನದ ಆಶಯ ಗಾಳಿಗೆ ತೂರುವವರ ಶಿಕ್ಷಿಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಸಂವಿಧಾನಕ್ಕೆ ಧಕ್ಕೆ ತರುವ ಕೆಲಸಗಳು ದೇಶಾದ್ಯಂತ ನಡೆಯುತ್ತಿವೆ. ಅಕ್ರಮ ಗೋ ಸಾಗಾಟ, ಲವ್ ಜಿಹಾದ್, ಬಲವಂತದ ಮತಾಂತರ ಹಾಗೂ ಕಾರ್ಮಿಕರ ವಲಸೆ ನೀತಿಯಲ್ಲಿ ಸಾಕಷ್ಟು ತೊಂದರೆಗಳಿದ್ದು ಪ್ರಜಾಪ್ರಭುತ್ವ ರಕ್ಷಿಸಬೇಕು ಎಂದು ಆಗ್ರಹಿಸಿ ಬಜರಂಗ ದಳ ಕಾರ್ಯಕರ್ತರು ಪಟ್ಟಣದಲ್ಲಿ ಗುರುವಾರ ಪ್ರತಿಭಟನೆ ನಡೆಸಿದರು.

ವಿಶ್ವ ಹಿಂದು ಪರಿಷತ್ ಪ್ರಾಂತ್ಯ ಕಾರ್ಯದರ್ಶಿ ಮಹಿಪಾಲ್ ಮಾತನಾಡಿ, ಸಂವಿಧಾನದ ಆಶಯಗಳಿಗೆ ಧಕ್ಕೆ ತರುತ್ತಿರುವವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಸಮಾಜಘಾತಕ ಶಕ್ತಿಗಳ ವಿರುದ್ಧ ಹೋರಾಡಲು ಹಿಂದು ಸಂಘಟನೆಗಳು ಸಜ್ಜಾಗಿವೆ ಎಂದರು.




ಧರ್ಮ, ಮತ, ಭಾಷೆ ಹಾಗೂ ಪಂಗಡಗಳ ಆಧಾರದ ಮೇಲೆ ಸಮಾಜ ವಿಭಜಿಸುವ ರಾಜಕಾರಣವನ್ನು ಸರ್ಕಾರಗಳು ಕೈಬಿಡಬೇಕು. ಆಡಳಿತವು ಎಲ್ಲಾ ಸಮುದಾಯಗಳಿಗೂ ಸಮಾನ ನ್ಯಾಯ ಒದಗಿಸಬೇಕು. ಇಲ್ಲಿನ ಜನರಲ್ಲಿ ಧಾರ್ಮಿಕ ನಂಬಿಕೆ, ರಾಷ್ಟ್ರಭಕ್ತಿ ಹಾಗು ಪರಂಪರೆಗಳ ಬಗ್ಗೆ ಬದ್ಧತೆ ಇದೆ ಎಂದು ಹೇಳಿದರು.

ಸಮಾಜದಲ್ಲಿ ಧಾರ್ಮಿಕ ಅಥವಾ ಸಾಮಾಜಿಕ ಅಶಾಂತಿ ಉಂಟುಮಾಡುವ ಯಾವುದೇ ಪ್ರಯತ್ನಗಳನ್ನು ಜನರು ಒಪ್ಪುವುದಿಲ್ಲ. ಇತ್ತೀಚಿನ ದಿನಗಳಲ್ಲಿ ಜಿಲ್ಲೆಯಲ್ಲಿ ನಡೆದಿರುವ ಕೆಲವು ಘಟನೆಗಳು ಹಾಗೂ ಯುವಜನರನ್ನು ಗುರಿಯಾಗಿಸಿಕೊಂಡು ನಡೆಯುತ್ತಿರುವುದಾಗಿ ಆರೋಪಿಸಲಾಗುತ್ತಿರುವ ಚಟುವಟಿಕೆಗಳ ಕುರಿತು ಸಮಗ್ರ ತನಿಖೆ ನಡೆಸಿ, ಕಾನೂನುಬದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಹಿಂದೂ ಹಿತರಕ್ಷಣಾ ವೇದಿಕೆಯ ಮುಖಂಡ ರಘು ಸಕಲೇಶಪುರ ಮಾತನಾಡಿ, ದೇಶದ ವಿವಿಧ ಭಾಗಗಳಲ್ಲಿ ನಡೆಯುತ್ತಿರುವ ಘಟನೆಗಳ ಹಿನ್ನೆಲೆಯಲ್ಲಿ ಹಿಂದು ಸಮಾಜದಲ್ಲಿ ಅಸಮಾಧಾನ ಹಾಗೂ ಆಕ್ರೋಶ ವ್ಯಕ್ತವಾಗುತ್ತಿದೆ. ಗೋ ಸಂರಕ್ಷಣೆ, ಲವ್ ಜಿಹಾದ್ ಆರೋಪಗಳು ಹಾಗೂ ಅಕ್ರಮ ವಲಸೆ ವಿಚಾರಗಳ ಕುರಿತು ನಿರಂತರ ಜನಜಾಗೃತಿ ಮತ್ತು ಕಾನೂನುಬದ್ಧ ಹೋರಾಟ ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಗೋ ರಕ್ಷಣೆಗಾಗಿ ಕಾರ್ಯನಿರ್ವಹಿಸುವವರಿಗೆ ಸೂಕ್ತ ರಕ್ಷಣೆ ಹಾಗು ನ್ಯಾಯ ದೊರೆಯಬೇಕು. ಮಧ್ಯಪ್ರದೇಶದಲ್ಲಿ ಗೋ ಸಂರಕ್ಷಣೆ ಪ್ರಕರಣಕ್ಕೆ ಸಂಬಂಧಿಸಿ ನ್ಯಾಯಾಲಯ ನೀಡಿರುವ ತೀರ್ಪಿನ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಲವ್ ಜಿಹಾದ್ ಆರೋಪಗಳ ಕುರಿತು ಮಾತನಾಡಿದ ಅವರು, ಯುವತಿಯರನ್ನು ಗುರಿಯಾಗಿಸಿಕೊಂಡು ಮೋಸದ ಘಟನೆಗಳು ನಡೆಯುತ್ತಿವೆ ಎಂಬ ಆರೋಪಗಳ ಬಗ್ಗೆ ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು ಎಂದು ಕರೆ ನೀಡಿದರು.

ಸಕಲೇಶಪುರದಲ್ಲಿ ನಡೆದಿತ್ತೆಂದು ಆರೋಪಿಸಲಾಗಿರುವ ಗೋ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿ ಈಗಾಗಲೇ ದೂರು ಸಲ್ಲಿಸಲಾಗಿದ್ದು, ಪ್ರಕರಣದ ತನಿಖೆಯನ್ನು ವೇಗಗೊಳಿಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಪೊಲೀಸರಿಗೆ ಒತ್ತಾಯಿಸಿದರು.

ವಿಶ್ವ ಹಿಂದು ಪರಿಷತ್ ಜಿಲ್ಲಾ ಕಾರ್ಯದರ್ಶಿ ಹರೀಶ್ ಕರಡಿಗಾಲ, ಬಾಲಕೃಷ್ಣ, ವಿಜಯ್ ಕುಮಾರ್, ಬಜರಂಗದಳದ ವಿಷ್ಣು, ಸೃಜನ್, ರಘು ಬಾಳೆಗದ್ದೆ ಮತ್ತಿತರರಿದ್ದರು.

# ರಸಗೊಬ್ಬರಕ್ಕೆ ಕೊರತೆಯಾಗದಂತೆ ಕ್ರಮಕ್ಕೆ ಆಗ್ರಹ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲೂಕಿನಲ್ಲಿ ಹಾಗೂ ಹೋಬಳಿ ಕೇಂದ್ರದ ವ್ಯಾಪ್ತಿಯಲ್ಲಿ ರೈತರಿಗೆ ಕೃಷಿ ಚಟುವಟಿಕೆಗೆ ಪೂರಕವಾಗುವ ನಿಟ್ಟಿನಲ್ಲಿ ಯೂರಿಯಾ ಹಾಗೂ ರಸಗೊಬ್ಬರ ಅಭಾವ ಆಗದಂತೆ ಕ್ರಮ ತೆಗೆದುಕೊಳ್ಳುವಂತೆ ತಾಲ್ಲೂಕು ಆಡಳಿತವನ್ನು ರಾಜ್ಯ ರೈತ ಸಂಘದ ತಾಲೂಕು ಅಧ್ಯಕ್ಷ ಎಸ್.ಎಸ್.ರಾಮಚಂದ್ರು ಒತ್ತಾಯಿಸಿದರು.

ತಾಲೂಕಿನ ನುಗ್ಗೇಹಳ್ಳಿ ಹೋಬಳಿ ರೈತ ಸಂಪರ್ಕ ಕೇಂದ್ರದಲ್ಲಿ ಕೃಷಿ ಅಧಿಕಾರಿ ನೇತೃತ್ವದಲ್ಲಿ ರೈತ ಸಂಘದ ಮುಖಂಡರು ರಸಗೊಬ್ಬರ ಅಂಗಡಿ ಮಾಲೀಕರು ಹಾಗೂ ವಿತರಕರು ಮತ್ತು ರೈತರೊಂದಿಗೆ ನಡೆದ ಸಭೆಯಲ್ಲಿ ಮಾತನಾಡಿದರು.

ತಾಲೂಕಿನ ಹಿರೀಸಾವೆ ಹೋಬಳಿಯಲ್ಲಿ ಯೂರಿಯಾ ಖರೀದಿಸಲು ರೈತರು ನೂರಾರು ಸಂಖ್ಯೆಯಲ್ಲಿ ಮುಗಿಬಿದ್ದಿದ್ದಾರೆ. ಅದರಿಂದ ರೈತರಿಗೆ ಸಮಸ್ಯೆಯಾಗುತ್ತಿದೆ. ತಾಲೂಕಿನಲ್ಲಿ ರಸಗೊಬ್ಬರ ಹಾಗೂ ಯೂರಿಯಾ ಕೆಲವು ಭಾಗಗಳಲ್ಲಿ ಅಭಾವ ಉಂಟಾಗಿದೆ. ಈ ಬಗ್ಗೆ ತಾಲೂಕು ಆಡಳಿತ ಗಮನಹರಿಸಬೇಕು ಎಂದರು.




ಜೂನ್‌ನಿಂದ ಆಗಸ್ಟ್‌ನಲ್ಲಿ ರೈತರು ಬಿತ್ತನೆ ಕಾರ್ಯಗಳಿಗೆ ಮಹತ್ವ ಕೊಡುತ್ತಾರೆ. ಈ ಹಿನ್ನೆಲೆಯಲ್ಲಿ ದಾಸ್ತಾನು ಪೂರೈಕೆಯ ಬಗ್ಗೆ ತಾಲೂಕು ಆಡಳಿತಕ್ಕೆ ಮುನ್ನೆಚರಿಕೆ ಇರಬೇಕು. ಆದರೆ ಪಾಶ್ಚಿಮಾತ್ಯ ದೇಶಗಳಲ್ಲಿ ಯುದ್ಧದ ಹಿನ್ನೆಲೆಯಲ್ಲಿ ಪೂರೈಕೆಯಲ್ಲಿ ತೊಂದರೆ ಆಗಿದೆ ಎಂದು ಅಧಿಕಾರಿಗಳು ತಿಳಿಸುತ್ತಾರೆ. ಅವರ ಈ ಉತ್ತರದಿಂದ ರೈತರ ಸಮಸ್ಯೆ ಬಗೆಹರಿಯುವುದಿಲ್ಲ. ಪರಿಹಾರ ಹುಡುಕುವ ನಿಟ್ಟಿನಲ್ಲಿ ಅಧಿಕಾರಿಗಳು ಮುಂದಾಗುವಂತೆ ಎಚ್ಚರಿಸಿದರು.

ಯೂರಿಯಾ ಅಭಾವದಿಂದ ರೈತರು ಸಂಕಷ್ಟ ಎದುರಿಸುವ ಬದಲು ನ್ಯಾನೋ ಯೂರಿಯಾ ಬಳಸಿದರೆ ಉತ್ತಮ ಬೆಳೆಯ ಜೊತೆಗೆ ಮಣ್ಣಿನ ಫಲವತ್ತತೆಯನ್ನು ಉಳಿಸಬಹುದು. ರೈತರು ಈ ಬಗ್ಗೆ ಕೃಷಿ ಅಧಿಕಾರಿಗಳಿಂದ ಮಾಹಿತಿ ಪಡೆದು ಬಳಸುವಂತೆ ಹಾಗೂ ಸರ್ಕಾರ ಕೃಷಿ ಇಲಾಖೆಯ ಮೂಲಕ ನ್ಯಾನೋ ಯೂರಿಯಾ ಬೆಂಬಲ ಬೆಲೆಯೊಂದಿಗೆ ಮಾರಾಟಕ್ಕೆ ಅವಕಾಶ ಕಲ್ಪಿಸುವಂತೆ ಮನವಿ ಮಾಡಿದರು.

ಹೋಬಳಿ ಕೃಷಿ ಅಧಿಕಾರಿ ಜಿ.ವಿ. ದಿನೇಶ್ ಮಾತನಾಡಿ, ಹೋಬಳಿ ವ್ಯಾಪ್ತಿಯಲ್ಲಿ ರಸಗೊಬ್ಬರ ಹಾಗೂ ಯೂರಿಯಾ ಅಭಾವ ಹೆಚ್ಚಿನ ಪ್ರಮಾಣದಲ್ಲಿ ಕಾಣುತ್ತಿಲ್ಲ. ಹೋಬಳಿ ವ್ಯಾಪ್ತಿಗೆ ಬರುವ ರಸಗೊಬ್ಬರ ಮಾರಾಟ ಅಂಗಡಿಗಳಲ್ಲಿ ಮತ್ತು ಕೃಷಿಪತ್ತಿನ ಸಹಕಾರ ಸಂಘಗಳಲ್ಲಿ ರೈತರಿಗೆ ತೊಂದರೆ ಆಗದಂತೆ ಪೂರೈಕೆ ಮಾಡಲಾಗುತ್ತಿದೆ. ಸಣ್ಣಪುಟ್ಟ ಸಮಸ್ಯೆ ಹೊರತುಪಡಿಸಿದರೆ ಹೆಚ್ಚಿನ ಸಮಸ್ಯೆ ಕಾಣುತ್ತಿಲ್ಲ ಎಂದು ತಿಳಿಸಿದರು.

ಶ್ರೀ ಬಾಲಾಜಿ ರಸಗೊಬ್ಬರ ಅಂಗಡಿಯ ವರ್ತಕ ಎನ್.ಎಸ್. ಪ್ರವೀಣ್ ಕುಮಾರ್ ಮಾತನಾಡಿ, ಜಿಲ್ಲೆಯಲ್ಲಿ ರಸಗೊಬ್ಬರ ಅಂಗಡಿಗಳ ಪೂರೈಕೆಗೆ ಅನುಗುಣವಾಗಿ ಯೂರಿಯಾ ಹಾಗೂ ರಸಗೊಬ್ಬರ ದಾಸ್ತಾನು ಬರುತ್ತಿಲ್ಲ. ಜಿಲ್ಲೆಗೆ ಬರುವ ನೂರರಷ್ಟು ದಾಸ್ತಾನಿನಲ್ಲಿ 60:40 ಅನುಪಾತದಲ್ಲಿ ಶೇ. 60 ರಷ್ಟು ರಸಗೊಬ್ಬರ ಅಂಗಡಿಗಳಿಗೆ ಶೇ. 40 ರಷ್ಟು ದಾಸ್ತಾನು ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಪುರೈಕೆಯಾಗುತ್ತಿದೆ. ಇದರಿಂದ ಅಂಗಡಿಗಳಲ್ಲೂ ಸಹ ಬಯೋಮೆಟ್ರಿಕ್ ಮೂಲಕ ರೈತರಿಗೆ ಯೂರಿಯಾ ವಿತರಣೆ ಮಾಡಲಾಗುತ್ತಿದೆ. ರೈತರಿಗೆ ಯಾವುದೇ ಸಮಸ್ಯೆಯಾಗದಂತೆ ಕೃಷಿ ಅಧಿಕಾರಿಗಳ ಮಾರ್ಗ ಸೂಚನೆಯಂತೆ ಮಾರಾಟ ಮಾಡಲಾಗುತ್ತಿದೆ ಎಂದರು.

ಹೋಬಳಿ ರೈತ ಸಂಘದ ಅಧ್ಯಕ್ಷ ಸೋಮಶೇಖರಯ್ಯ, ರಸಗೊಬ್ಬರ ಅಂಗಡಿ ಮಾಲೀಕ ಎನ್.ಪಿ.ರವಿ, ಸುಂದರೇಶ್, ಉಮೇಶ್, ಸುಬ್ಬೇಗೌಡ, ರೈತ ಮುಖಂಡರಾದ ಶಿವಪ್ಪ, ಅಮಾಸಯ್ಯ, ರಾಜಣ್ಣ, ಮಂಜಣ್ಣ, ರೈತ ಸಂಪರ್ಕ ಕೇಂದ್ರದ ಸಿಬ್ಬಂದಿ ವಿಜಯ್ ಕುಮಾರ್, ಚೈತ್ರ, ರಾಜೇಶ್ವರಿ, ಮಂಜುನಾಥ್ ಹಾಗೂ ಇತರರು ಹಾಜರಿದ್ದರು.

# ಮೂರ್ಕಣ್ಣು ಗುಡ್ಡದಲ್ಲಿ ಹುಲಿ ಸಂಚಾರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಕಲೇಶಪುರ ತಾಲ್ಲೂಕಿನ ಮೂರ್ಕಣ್ಣು ಗುಡ್ಡ ವ್ಯಾಪ್ತಿಯ ಅರಣ್ಯ ಪ್ರದೇಶದಲ್ಲಿ ಹುಲಿಗಳ ಸಂಚಾರ ಅರಣ್ಯ ಇಲಾಖೆಯ ಕ್ಯಾಮೆರಾ ಟ್ರ್ಯಾಪ್‌ಗಳಲ್ಲಿ ಸೆರೆಯಾಗಿದೆ.

ಕಾಡಿನೊಳಗಿನ ಮಾನವ ಸಂಚಾರಕ್ಕೆ ಕಟ್ಟುನಿಟ್ಟಿನ ನಿರ್ಬಂಧ ಹೇರಲಾಗಿರುವ ಕಾರಣ, ವನ್ಯಜೀವಿಗಳಿಗೆ ಸುರಕ್ಷಿತ ಪರಿಸರ ನಿರ್ಮಾಣವಾಗಿದೆ. ಹೀಗಾಗಿ ಕಳೆದ ಎರಡು ವರ್ಷಗಳಿಂದ ಅರಣ್ಯ ಇಲಾಖೆ ನಿಗಾ ವಹಿಸಿ ನಡೆಸುತ್ತಿದ್ದ ನಿರಂತರ ಕಾರ್ಯಾಚರಣೆಯಲ್ಲಿ ಹುಲಿಗಳ ಚಲನವಲನ ಪತ್ತೆಯಾಗಿದೆ. ಒಂದು ಗಂಡು ಹಾಗೂ ಒಂದು ಹೆಣ್ಣು ಹುಲಿಗಳು ಅರಣ್ಯ ಇಲಾಖೆ ಅಳವಡಿಸಿದ್ದ ಕ್ಯಾಮೆರಾದಲ್ಲಿ ಸೆರೆಯಾಗಿವೆ.

ಅರಣ್ಯ ಇಲಾಖೆ ಸಿಬ್ಬಂದಿ ಗಸ್ತು ಕಾರ್ಯಾಚರಣೆ ವೇಳೆಯೂ ಹುಲಿಯ ಹೆಜ್ಜೆ ಗುರುತು, ಮರಗಳ ಮೇಲೆ ಉಗುರು ಗುರುತು, ವಿಸರ್ಜನೆ ಹಾಗೂ ತನ್ನ ವ್ಯಾಪ್ತಿ ಗುರುತಿಸಲು ಹುಲಿ ಬಿಟ್ಟಿರುವ ವಾಸನೆ ಗುರುತುಗಳು ಪತ್ತೆಯಾಗಿದ್ದವು. ಈ ಎಲ್ಲಾ ಸುಳಿವುಗಳ ಆಧಾರದ ಮೇಲೆ ಹುಲಿಗಳ ಅಸ್ತಿತ್ವದ ಬಗ್ಗೆ ಇಲಾಖೆ ಅನುಮಾನ ವ್ಯಕ್ತಪಡಿಸುತ್ತಿದ್ದರೂ, ಕ್ಯಾಮೆರಾ ಟ್ರ್ಯಾಪ್ ದೃಶ್ಯಗಳು ಇದೀಗ ಅದನ್ನು ಅಧಿಕೃತವಾಗಿ ದೃಢಪಡಿಸಿವೆ.

# ಬೇಲೂರು ಪುರಸಭೆ ಜಾಗದಲ್ಲಿ ಕಾಂಪೌಂಡ್ ನಿರ್ಮಾಣಕ್ಕೆ ತಡೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪಟ್ಟಣದ ಹೊಳೆಬೀದಿಯ ಭಸ್ಮೀಕರಣ ಕೇಂದ್ರದ ಪಕ್ಕದಲ್ಲಿರುವ ಪುರಸಭೆಗೆ ಸೇರಿದ ಜಾಗವನ್ನು ಖಾಸಗಿ ಶಾಲೆಯವರು ಒತ್ತುವರಿ ಮಾಡಿಕೊಂಡು ಕಾಂಪೌಂಡ್ ನಿರ್ಮಾಣ ಮಾಡುತ್ತಿದ್ದಾರೆ ಎಂಬ ಸಾರ್ವಜನಿಕರ ದೂರಿನ ಹಿನ್ನೆಲೆ ಪುರಸಭೆ ಅಧಿಕಾರಿಗಳು ಕಾಮಗಾರಿಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿದ್ದಾರೆ.

ಹೊಳೆಬೀದಿಯ ಖಾತೆ ಸಂಖ್ಯೆ 1028/946ರಲ್ಲಿ ಪುರಸಭೆಗೆ ಸೇರಿದ ಸುಮಾರು 180 ಅಡಿ ಜಾಗವನ್ನು ಅತಿಕ್ರಮಿಸಿ ಕಾಂಪೌಂಡ್ ನಿರ್ಮಾಣ ನಡೆಸಲಾಗುತ್ತಿದೆ ಎಂದು ಆರೋಪಿಸಲಾಗಿದೆ. ಈ ಕುರಿತು ಸಾರ್ವಜನಿಕರಿಂದ ದೂರು ಬಂದ ತಕ್ಷಣ ಸ್ಥಳಕ್ಕೆ ಭೇಟಿ ನೀಡಿದ ಪುರಸಭೆ ಆರೋಗ್ಯಾಧಿಕಾರಿ ಲೋಹಿತ್ ಅವರು ಕಾಮಗಾರಿಯನ್ನು ತಡೆಹಿಡಿದು ಪರಿಶೀಲನೆ ನಡೆಸಿದರು.

ಈ ವೇಳೆ ಶಾಲೆಯ ಸಿಬ್ಬಂದಿ ಹಾಗೂ ಪುರಸಭೆ ಅಧಿಕಾರಿಗಳ ನಡುವೆ ಕೆಲಕಾಲ ಮಾತಿನ ಚಕಮಕಿ ನಡೆಯಿತು.

ಶಾಲಾ ಆಡಳಿತ ಮಂಡಳಿಯು ಸಂಬಂಧಿಸಿದ ಭೂದಾಖಲೆಗಳು ಹಾಗೂ ಅಗತ್ಯ ದಾಖಲೆಗಳನ್ನು ಪುರಸಭೆಗೆ ಸಲ್ಲಿಸಿ ಪರಿಶೀಲನೆಗೆ ಒಳಪಡಿಸಬೇಕು. ಅಲ್ಲದೆ, ಪುರಸಭೆಯಿಂದ ಅಗತ್ಯ ಅನುಮತಿ ಪಡೆದ ನಂತರವೇ ಕಾಮಗಾರಿ ಮುಂದುವರಿಸಬೇಕು ಎಂದು ಅಧಿಕಾರಿಗಳು ಸೂಚನೆ ನೀಡಿದ್ದಾರೆ. ಅಲ್ಲಿಯವರೆಗೆ ಯಾವುದೇ ರೀತಿಯ ನಿರ್ಮಾಣ ಕಾರ್ಯ ಕೈಗೊಳ್ಳದಂತೆ ಎಚ್ಚರಿಕೆ ನೀಡಲಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ಪುರಸಭೆ ಮುಖ್ಯಾಧಿಕಾರಿ ಬಸವರಾಜು ಶಿಗ್ಗಾವಿ, ಪುರಸಭೆಯ ಆಸ್ತಿಯನ್ನು ಯಾರೊಬ್ಬರೂ ಒತ್ತುವರಿ ಮಾಡಲು ಅವಕಾಶ ನೀಡುವುದಿಲ್ಲ. ಖಾಸಗಿ ಶಾಲೆಗೆ ಸೇರಿದ ಜಾಗವನ್ನು ಅವರು ಭದ್ರಪಡಿಸಿಕೊಳ್ಳಬಹುದು. ಆದರೆ ಭಸ್ಮೀಕರಣ ಕೇಂದ್ರಕ್ಕೆ ಹೆಚ್ಚುವರಿಯಾಗಿ ಮೀಸಲಿಟ್ಟಿರುವ ಜಾಗವನ್ನು ಒತ್ತುವರಿ ಮಾಡಲಾಗಿದೆ ಎಂಬ ಮಾಹಿತಿ ಬಂದಿದೆ. ಈಗಾಗಲೇ ಸರ್ವೆಗೆ ಸೂಚನೆ ನೀಡಿದ್ದು, ಸರ್ವೆಯಲ್ಲಿ ಪುರಸಭೆಯ ಆಸ್ತಿ ಎಂದು ದೃಢಪಟ್ಟರೆ ಆ ಭಾಗವನ್ನು ತೆರವುಗೊಳಿಸಲಾಗುವುದು ಎಂದು ಸ್ಪಷ್ಟಪಡಿಸಿದರು.

# ಪಲ್ಸ್ ಪೋಲಿಯೋ ಅಭಿಯಾನ ಯಶಸ್ಸಿಗೆ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಜೂ. 28ರಂದು ನಡೆಯುವ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಯಶಸ್ವಿಗೆ ತಾಲೂಕಿನ ಎಲ್ಲಾ ಸಂಘ-ಸಂಸ್ಥೆಗಳು, ಚುನಾಯಿತ ಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಸಹಕರಿಸಬೇಕೆಂದು ತಾಲೂಕು ವೈದ್ಯಾಧಿಕಾರಿ ಡಾ. ಮಹೇಶ್ ಮನವಿ ಮಾಡಿದರು.

ತಾಲ್ಲೂಕು ಆಡಳಿತ ಸೌಧದ ಸಭಾಂಗಣದಲ್ಲಿ ಕರೆಯಲಾಗಿದ್ದ ಪಲ್ಸ್ ಪೋಲಿಯೋ ಚಾಲನಾ ಸಮಿತಿ ಕಾರ್ಯಪಡೆಯ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ತಾಲೂಕಿನಲ್ಲಿ ಒಟ್ಟು 1,30,738 ಜನಸಂಖ್ಯೆ ಇದ್ದು 5 ವರ್ಷ ಒಳಪಟ್ಟ ಮಕ್ಕಳ ಸಂಖ್ಯೆ 6951 ಇದ್ದು ಈ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡುವ ಗುರಿ ಹೊಂದಲಾಗಿದೆ. ಒಟ್ಟು ತಾಲೂಕಿನಲ್ಲಿ 73 ಪೋಲಿಯೋ ಬೂತ್‌ಗಳನ್ನು ಮಾಡಲಾಗುತ್ತಿದ್ದು ಲಸಿಕೆ ನೀಡುವ ಸಿಬ್ಬಂದಿ 300 ಹಾಗೂ ಮೇಲ್ವಿಚಾರಕರು 18 ಜನ ಕರ್ತವ್ಯ ನಿರ್ವಹಿಸಲಿದ್ದಾರೆ ಎಂದರು.



ಗ್ರಾಮೀಣ ಪ್ರದೇಶಗಳಲ್ಲಿ ಅಂಗನವಾಡಿ ಕೇಂದ್ರಗಳು ಮತ್ತು ಶಾಲೆಗಳಲ್ಲಿ ಲಸಿಕೆ ಹಾಕಲಾಗುವುದು. ಪಟ್ಟಣ ಪ್ರದೇಶಗಳಲ್ಲಿ ಬಸ್ ನಿಲ್ದಾಣಗಳಲ್ಲಿ ಪಲ್ಸ್ ಪೋಲಿಯೋ ಬೂತ್‌ಗಳನ್ನು ತೆರೆಯಲು ಯೋಜಿಸಲಾಗಿದ್ದು ಜೂ. 28ರ ಬೆಳಿಗ್ಗೆ 8 ಗಂಟೆಗೆ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಕಾರ್ಯಕ್ರಮ ಪ್ರಾರಂಭವಾಗುತ್ತದೆ ಎಂದರು.

ಸಾರ್ವಜನಿಕರಿಗೆ ಈ ಕುರಿತು ವ್ಯಾಪಕ ಮಾಹಿತಿ ನೀಡಲು ಸೂಚಿಸಲಾಗಿದ್ದು ಗ್ರಾಮೀಣ ಹಾಗೂ ಪಟ್ಟಣ ಪ್ರದೇಶಗಳಲ್ಲಿ ಲಸಿಕೆ ನೀಡುವ ಸಿಬ್ಬಂದಿಗೆ ಸ್ಥಳೀಯ ಸಂಘ-ಸಂಸ್ಥೆಗಳ ಸಹಯೋಗದೊಂದಿಗೆ ಅಗತ್ಯ ಸೌಲಭ್ಯಗಳನ್ನು ಒದಗಿಸಲು ತೀರ್ಮಾನಿಸಲಾಯಿತು. ಪಟ್ಟಣ ವ್ಯಾಪ್ತಿಯಲ್ಲಿ ಎರಡು ಮೊಬೈಲ್ ವಾಹನಗಳನ್ನು ನಿಯೋಜಿಸುವುದರ ಜೊತೆಗೆ ರೈಲ್ವೆ ನಿಲ್ದಾಣದ ಸೌಲಭ್ಯವನ್ನೂ ಬಳಸಿಕೊಳ್ಳಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಕಾರ್ಯಕ್ರಮದ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮೈಕ್ ಮೂಲಕ ಪ್ರಚಾರ ನಡೆಸುವಂತೆ ಸೂಚಿಸಲಾಯಿತು. ವಿವಿಧ ಅಭಿವೃದ್ಧಿ ಯೋಜನಾ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಅಂಗನವಾಡಿ ಕಾರ್ಯಕರ್ತೆಯರು ನಿಗದಿತ ಸಮಯಕ್ಕೆ ಕರ್ತವ್ಯಕ್ಕೆ ಹಾಜರಾಗುವಂತೆ ನೋಡಿಕೊಳ್ಳಬೇಕೆಂದು ತಿಳಿಸಲಾಯಿತು.

ಆರೋಗ್ಯ ಇಲಾಖೆಯ ಅಧಿಕಾರಿಗಳು ಅಭಿಯಾನ ಆರಂಭಕ್ಕೂ ಮುನ್ನ ಹಾಗೂ ಕಾರ್ಯಕ್ರಮ ಪೂರ್ಣಗೊಳ್ಳುವವರೆಗೆ ಅಗತ್ಯ ಮಾರ್ಗದರ್ಶನ ಮತ್ತು ಸಹಕಾರ ನೀಡಲಿದ್ದಾರೆ. ಲಸಿಕೆ ಹಾಗೂ ಸಿಬ್ಬಂದಿಯನ್ನು ವಿವಿಧ ಕೇಂದ್ರಗಳಿಗೆ ಸಾಗಿಸಲು ಜಿಲ್ಲಾ ಮಟ್ಟದಿಂದ ವಾಹನಗಳನ್ನು ನಿಯೋಜಿಸಲಾಗಿದೆ.

ಗ್ರಾಮೀಣ ಪ್ರದೇಶದಲ್ಲಿ ಮೂರು ದಿನಗಳ ಕಾಲ ಅಂದರೆ ಜೂನ್ 28, 29 ಹಾಗೂ 30 ರಂದು ಪಲ್ಸ್ ಪೋಲಿಯೋ ಲಸಿಕೆ ಕಾರ್ಯಕ್ರಮ ನಡೆಯಲಿದ್ದು ಪಟ್ಟಣ ಪ್ರದೇಶದಲ್ಲಿ ಜೂನ್ 28 ರಿಂದ ಜುಲೈ 1ರ ವರೆಗೆ ನಾಲ್ಕು ದಿನಗಳ ಕಾಲ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಕಾರ್ಯದಲ್ಲಿ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸಲಿದ್ದು ಈ ಸಂದರ್ಭದಲ್ಲಿ ಚೆಸ್ಕಾಂ ಇಲಾಖೆಯವರು ಸಮರ್ಪಕವಾಗಿ ವಿದ್ಯುತ್ ಪೂರೈಕೆ ಮಾಡಿಕೊಡಬೇಕೆಂದು ಮನವಿ ಮಾಡಿದ ಅವರು ಪ್ರತಿಯೊಬ್ಬರು ಐದು ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಬೇಕೆಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಕಂದಾಯ ಇಲಾಖೆಯ ಶಿರಸ್ತೇದಾರ್ ರವಿಕುಮಾರ್, ಚುನಾವಣಾ ಶಿರಸ್ತೆದಾರ್ ಜನಾರ್ಧನ್, ಶ್ವೇತಾ, ವಲಯ ಅರಣ್ಯ ಅಧಿಕಾರಿ ಹೇಮಂತ್ ಕುಮಾರ್ ಮತ್ತಿತರರಿದ್ದರು.

# ಗಾಂಜಾ ಸೇವನೆ: 7 ಮಂದಿ ಬಂಧನ

ಹಾಸನ: ಶ್ರವಣಬೆಳಗೊಳ ಹಾಗೂ ಆಲೂರು ಪೊಲೀಸ್ ಠಾಣೆ ವ್ಯಾಪ್ತಿಯ ಪ್ರತ್ಯೇಕ ಪ್ರಕರಣಗಳಲ್ಲಿ ಗಾಂಜಾ ಸೇವನೆ ಮಾಡಿದ್ದ ಆರೋಪದಡಿ 7 ಮಂದಿಯನ್ನು ಪೊಲೀಸರು ಬಂಧಿಸಿದ್ದಾರೆ.

ಶ್ರವಣಬೆಳಗೊಳ ದೇವೇಗೌಡ ವೃತ್ತದ ಸಮೀಪ ಪಿಎಸ್‌ಐ ನವೀನ್ ಕುಮಾರ್ ಅವರು ಗಸ್ತಿನಲ್ಲಿದ್ದ ವೇಳೆ ಮೂವರು ಅನುಮಾನಾಸ್ಪದವಾಗಿ ಕಂಡುಬಂದಿದ್ದರು. ಅವರನ್ನು ವಶಕ್ಕೆ ಪಡೆದು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿದಾಗ ಗಾಂಜಾ ಸೇವನೆ ಮಾಡಿರುವುದು ದೃಢಪಟ್ಟಿದೆ. ಈ ಸಂಬಂಧ ಸುಂಡಹಳ್ಳಿ ಗ್ರಾಮದ ಸಂದೀಪ್ (38), ಶ್ರೀಕಂಠನಗರದ ಮೋಹನ್ (35) ಹಾಗು ಶಿವಮೊಗ್ಗ ಜಿಲ್ಲೆಯ ಭದ್ರಾವತಿ ತಾಲ್ಲೂಕಿನ ಬಾರಂದೂರು ಗ್ರಾಮದ ಸುದೀಪ್ (19) ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

ಇನ್ನೊಂದು ಪ್ರಕರಣದಲ್ಲಿ ಆಲೂರು ತಾಲ್ಲೂಕಿನ ಕೊಡಗಿಹಳ್ಳಿ ಗ್ರಾಮದ ಆಂಜನೇಯ ಸ್ವಾಮಿ ದೇವಾಲಯದ ಬಳಿ ಐವರು ಅನುಮಾನಾಸ್ಪದವಾಗಿ ಕುಳಿತಿದ್ದ ಮಾಹಿತಿ ಮೇರೆಗೆ ಪಿಎಸ್‌ಐ ಪ್ರವೀಣ್ ಕುಮಾರ್ ಹಾಗೂ ಸಿಬ್ಬಂದಿ ಕಾರ್ಯಾಚರಣೆ ನಡೆಸಿದರು. ವಶಕ್ಕೆ ಪಡೆದವರ ವೈದ್ಯಕೀಯ ಪರೀಕ್ಷೆಯಲ್ಲಿ ಗಾಂಜಾ ಸೇವನೆ ಮಾಡಿರುವುದು ದೃಢಪಟ್ಟಿದೆ.

ಈ ಸಂಬಂಧ ಕೊಡಗಿಹಳ್ಳಿ ಗ್ರಾಮದ ಕೀರ್ತಿ (20), ಗೇಕರವಳ್ಳಿ ಗ್ರಾಮದ ಕಿರಣ್ (29), ಆಲೂರು ಪಟ್ಟಣದ ಆಶಾ ಬಡಾವಣೆಯ ಶಮಂತ್ (29), ಕಣತೂರು ಗ್ರಾಮದ ಸಚ್ಚಿನ್ ಗೌಡ (21) ಹಾಗೂ ಆಲೂರು ಪಟ್ಟಣದ ಅಫ್ರಿದ್ (20) ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

# ಇತಿಹಾಸದಲ್ಲಿ ಈ ದಿನ

## ಜೂನ್-19

1862: ಅಮೆರಿಕದಲ್ಲಿ ಗುಲಾಮಗಿರಿಯನ್ನು ಎಲ್ಲಾ ಫೆಡರಲ್ ಪ್ರದೇಶಗಳಲ್ಲಿ ನಿಷೇಧಿಸುವ ಕಾನೂನಿಗೆ ಅನುಮೋದನೆ ದೊರೆಯಿತು.

1910: ಅಮೆರಿಕದಲ್ಲಿ ಮೊದಲ ಫಾದರ್ಸ್ ಡೇ (ತಂದೆಯರ ದಿನ) ಆಚರಣೆ ನಡೆಯಿತು.

1945: ಭಾರತದ ಸ್ವಾತಂತ್ರ್ಯ ಹೋರಾಟಗಾರ ಹಾಗೂ ನಾಯಕ ಬಾಲ ಗಂಗಾಧರ ತಿಲಕ್ ಅವರ ಜನ್ಮ ದಿನವನ್ನು ಹಲವು ಕಡೆಗಳಲ್ಲಿ ಸ್ಮರಿಸಲಾಯಿತು.

1961: ಕುವೈತ್ ದೇಶವು ಯುನೈಟೆಡ್ ಕಿಂಗ್‌ಡಂನಿಂದ ಸ್ವಾತಂತ್ರ್ಯ ಪಡೆದಿತು.

1966: ಭಾರತದ ಖ್ಯಾತ ಸಂತೂರು ವಾದಕ ಪಂಡಿತ್ ಶಿವಕುಮಾರ್ ಶರ್ಮಾ ಅವರ ಸಂಗೀತ ಸಾಧನೆಗೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಯಿತು.

1970: ಭೂತಾನ್ ವಿಶ್ವಸಂಸ್ಥೆಯ ಸದಸ್ಯ ರಾಷ್ಟ್ರವಾಯಿತು.

1978: ಗಾರ್ಫೀಲ್ಡ್ ಕಾಮಿಕ್ ಮೊದಲ ಬಾರಿಗೆ ಪ್ರಕಟವಾಯಿತು.

2021: ಅಮೆರಿಕದಲ್ಲಿ ಜೂನ್ 19 ಅನ್ನು ಅಧಿಕೃತವಾಗಿ ರಾಷ್ಟ್ರೀಯ ರಜಾದಿನವನ್ನಾಗಿ ಘೋಷಿಸಲಾಯಿತು.

### ಜನನ

1623: ಬ್ಲೇಸ್ ಪಾಸ್ಕಲ್, ಗಣಿತಜ್ಞ ಮತ್ತು ವಿಜ್ಞಾನಿ

1947: ಸಲ್ಮಾನ್ ರಶ್ದಿ, ಲೇಖಕ

### ನಿಧನ

1993: ವಿಲಿಯಂ ಗೋಲ್ಡಿಂಗ್, ನೊಬೆಲ್ ಪ್ರಶಸ್ತಿ ವಿಜೇತ ಲೇಖಕ

# ಜೂ. 21ಕ್ಕೆ ಜೀ ಕನ್ನಡದಲ್ಲಿ ಲವ್ ಮಾಕ್ಟೆಲ್ 3 ಸಿನಿಮಾ ಪ್ರಸಾರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಪ್ರತಿ ವರ್ಗದ ಪ್ರೇಕ್ಷಕರಿಗೂ ಇಷ್ಟವಾಗುವ, ಮನಸ್ಸಿಗೆ ಹತ್ತಿರವಾಗುವ ಕಥೆಗಳನ್ನು ನೀಡುತ್ತಾ ಬಂದಿರುವ ಜೀ ಕನ್ನಡ, ತನ್ನ ವಾರಾಂತ್ಯದ ಸಿನಿಮಾ ಮನರಂಜನೆಯನ್ನು ಮತ್ತಷ್ಟು ರಂಗೇರಿಸುತ್ತಿದೆ. ಕನ್ನಡದ ಸೂಪರ್ ಹಿಟ್ ಲವ್ ಮಾಕ್‌ಟೇಲ್ ಸೀರಿಸ್‌ನ ಬಹು ನಿರೀಕ್ಷಿತ ಕೊನೆಯ ಭಾಗವಾದ ಲವ್ ಮಾಕ್ಟೆಲ್ 3 ಚಿತ್ರದ ವರ್ಲ್ಡ್ ಟೆಲಿವಿಷನ್ ಪ್ರೀಮಿಯರ್ ಅನ್ನು ಜೂನ್ 21ರ ಸಂಜೆ 4.30ಕ್ಕೆ ನಿಮ್ಮ ಮುಂದೆ ತರಲು ಸಿದ್ಧವಾಗಿದೆ.

ಲವ್ ಮಾಕ್ಟೆಲ್ 2 ಚಿತ್ರದ ನಂತರ ಹಲವು ವರ್ಷಗಳ ಬಳಿಕ ತೆರೆಕಂಡ ಲವ್ ಮಾಕ್ಟೆಲ್ 3 ಚಿತ್ರದಲ್ಲಿ ತಂದೆಯ ಪ್ರೀತಿ, ಕುಟುಂಬದ ಒಡನಾಟ, ಜವಾಬ್ದಾರಿ ಮತ್ತು ಎಂತಹ ಪರಿಸ್ಥಿತಿಯಲ್ಲೂ ಜೊತೆಗೆ ನಡೆದು ಸಾಗುವ ಕೌಟುಂಬಿಕ ಮೌಲ್ಯಗಳನ್ನು ತುಂಬಾ ಸುಂದರವಾಗಿ ತೋರಿಸಿದ್ದಾರೆ. ರಕ್ತ ಸಂಬಂಧಕ್ಕಿಂತ ಮಿಗಿಲಾದುದು ಏನೂ ಇಲ್ಲ ಎಂಬುದೇ ಈ ಚಿತ್ರದ ಮತ್ತೊಂದು ಹೈಲೈಟ್. ಭಾವನೆಗಳ ಹಲವು ಪದರಗಳನ್ನು ಒಳಗೊಂಡಿರುವ




ಈ ಕಥೆ, ಪ್ರೀತಿ, ನೋವು ಮತ್ತು ಜೀವನದಲ್ಲಿ ನಾವು ತೆಗೆದುಕೊಳ್ಳುವ ನಿರ್ಧಾರಗಳು ಸಂಬಂಧಗಳನ್ನು ಹೇಗೆ ಕಾಪಾಡಿಕೊಳ್ಳುತ್ತವೆ ಎಂಬುದನ್ನು ಮನಮುಟ್ಟುವಂತೆ ಹೇಳುತ್ತದೆ. ಜೊತೆಗೆ, ಕಾಳಜಿ, ನಂಬಿಕೆ ಮತ್ತು ಬದ್ಧತೆಯ ಮೂಲಕ ಕಟ್ಟಿಕೊಳ್ಳುವ ಸಂಬಂಧಗಳು ಎಷ್ಟು ಸುಂದರವಾಗಿರುತ್ತದೆ ಎಂಬುದನ್ನು ಮನಮುಟ್ಟುವಂತೆ ಈ ಚಿತ್ರದಲ್ಲಿ ತೋರಿಸಿದ್ದಾರೆ. ಡಾರ್ಲಿಂಗ್ ಕೃಷ್ಣ ಅವರು ನಿರ್ದೇಶಿಸಿರುವ ಈ ಚಿತ್ರದಲ್ಲಿ ಡಾರ್ಲಿಂಗ್ ಕೃಷ್ಣ, ಮಿಲನಾ ನಾಗರಾಜ್, ಸಂವೃತಾ ಸುನಿಲ್, ರೇಚಲ್ ಡೇವಿಡ್, ಅಮೃತಾ ಅಯ್ಯಂಗಾರ್, ದಿಲೀಪ್ ರಾಜ್ ಹಾಗೂ ಶ್ವೇತಾ ಆರ್. ಪ್ರಸಾದ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ.

ಈ ಕಥೆಯ ಹೀರೋ ಆದಿತ್ಯ ಅಲಿಯಾಸ್ ಆದಿ (ಡಾರ್ಲಿಂಗ್ ಕೃಷ್ಣ), ತಾನು ದತ್ತು ಪಡೆದ ಮಗಳು ನಿಧಿಯನ್ನು ತನ್ನ ಸ್ವಂತ ಮಗಳಂತೆ ಜವಾಬ್ದಾರಿಯಿಂದ ಸಾಕುತ್ತಿರುತ್ತಾನೆ. ಆದಿ ಮತ್ತು ನಿಧಿಯ ಬದುಕು ಸಣ್ಣ ಸಣ್ಣ ಸಂತೋಷಗಳು, ಸುಂದರ ನೆನಪುಗಳು ಮತ್ತು ಅಪ್ಪ-ಮಗಳ ಅಚ್ಚುಮೆಚ್ಚಿನ ಬಾಂಧವ್ಯದ ಸುತ್ತ ಸಾಗುತ್ತದೆ. ಕೇರ್ ಟೇಕರ್ ಜಗ್ಗಾ ಮಮ್ಮಿ ಮತ್ತು ಆತ್ಮೀಯ ಸ್ನೇಹಿತ ವಿಜಯ್‌ನ ಬೆಂಬಲ ಇವರಿಗೆ ಸದಾ ಇರತ್ತೆ. ಆದರೆ, ಡಾ. ಶಾಂತಾ ಅವರು ನಿಧಿ ತನ್ನ ಸ್ವಂತ ಮೊಮ್ಮಗಳು ಎಂದು ಹೇಳಿಕೊಂಡು ಬಂದಾಗ, ಆದಿ ಮತ್ತು ನಿಧಿಯ ಶಾಂತ ಜೀವನದಲ್ಲಿ ದೊಡ್ಡ ತಿರುವು ಉಂಟಾಗುತ್ತದೆ. ಅಲ್ಲಿಂದ ಆರಂಭವಾಗುವ ಕಾನೂನು ಹೋರಾಟ ಮತ್ತು ಭಾವನಾತ್ಮಕ ಸಂಘರ್ಷ, ಅವರ ಬದುಕನ್ನು ಸಂಪೂರ್ಣವಾಗಿ ಬದಲಾಯಿಸುತ್ತದೆ. ಸವಾಲಿನ ಮೇಲೆ ಸವಾಲುಗಳು ಎದುರಾಗುತ್ತಿದ್ದಂತೆ, ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾದ ಪರಿಸ್ಥಿತಿ ಬಂದಾಗ, ತಾನು ಪ್ರೀತಿಯಿಂದ ಕಟ್ಟಿಕೊಂಡಿರುವ ಸುಂದರವಾದ ಕುಟುಂಬವನ್ನು ಉಳಿಸಿಕೊಳ್ಳಲು ಆದಿ ಮಾಡುವ ಹೋರಾಟ ಮನಕಲಕುವಂತಿದೆ. ತಾನು ಪ್ರಾಣಕ್ಕಿಂತ ಹೆಚ್ಚಾಗಿ ಪ್ರೀತಿಸುವ ಮಗಳು ನಿಧಿಯಿಂದ ದೂರವಾಗುವ ಪರಿಸ್ಥಿತಿಯನ್ನು ಆದಿ ಹೇಗೆ ಎದುರಿಸುತ್ತಾನೆ? ಪ್ರೀತಿಯಿಂದ ಕಟ್ಟಿಕೊಂಡಿರುವ ತನ್ನ ಕುಟುಂಬವನ್ನು ಉಳಿಸಿಕೊಳ್ಳಲು ಅವನು ನಡೆಸುವ ಹೋರಾಟ ಸುಖಾಂತ್ಯ ಕಾಣುತ್ತಾ? ಇವೆಲ್ಲವನ್ನೂ ತಿಳ್ಕೊಳೋಕೆ ವೀಕ್ಷಿಸಿ ವರ್ಲ್ಡ್ ಟೆಲಿವಿಷನ್ ಪ್ರೀಮಿಯರ್ ಲವ್ ಮಾಕ್ಟೆಲ್ 3 ಜೂನ್ 21 ರಂದು ಸಂಜೆ 4:30 ರಿಂದ.

# ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಒಳ್ಳೆಯ ಕೆಲಸ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಶಿಕ್ಷಣ ಸೇರಿದಂತೆ ಎಲ್ಲಾ ಕ್ಷೇತ್ರದಲ್ಲಿ ಸಾಧನೆ ಮಾಡಿದವರನ್ನು ಗೌರವಿಸುವುದು ಸಮಾಜದ ಕರ್ತವ್ಯ, ಕನ್ನಡ ಸಾಹಿತ್ಯ ಪರಿಷತ್ ಹೋಬಳಿ ಘಟಕವು ಮಕ್ಕಳನ್ನು ಅಭಿನಂದಿಸುವ ಮೂಲಕ ಅವರು ಹೆಚ್ಚಿನ ಸಾಧನೆ ಮಾಡುವಂತೆ ಪ್ರೇರೆಪಿಸುತ್ತಿರುವುದು ಉತ್ತಮವಾದ ಕೆಲಸ ಎಂದು ಆದಿಚುಂಚನಗಿರಿ ಹಾಸನ ಮಠದ ಕಾರ್ಯದರ್ಶಿ ಶ್ರೀ ಶಂಭುನಾಥ ಸ್ವಾಮೀಜಿ ಹೇಳಿದರು.



ತಾಲ್ಲೂಕಿನ ಕಬ್ಬಳಿ ಶ್ರೀ ಬಸವೇಶ್ವರಸ್ವಾಮಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ ಹೋಬಳಿ ಘಟಕವು ಶಾಲೆಯ ಸಹಯೋಗದಲ್ಲಿ ಏರ್ಪಡಿಸಿದ್ದ 202526ನೇ ಸಾಲಿನ ಹತ್ತನೇ ತರಗತಿ ಮತ್ತು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಮತ್ತು ಕನ್ನಡ ಭಾಷೆಯಲ್ಲಿ ಪೂರ್ಣ ಅಂಕಗಳನ್ನುಗಳಿಸಿದ ಹೋಬಳಿಯ ಶಾಲೆಗಳ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ವಿದ್ಯೆ ಕಲಿತವರು ದಾರಿ ತಪ್ಪಬಹುದು, ಆದರೆ ಸಂಸ್ಕಾರ ಕಲಿತವರು ಎಂದಿಗೂ ದಾರಿ ತಪ್ಪುವುದಿಲ್ಲ.

ಆದಿಚುಂಚನಗಿರಿ ಮಠದ ಬಾಲಗಂಗಾಧರನಾಥ ಸ್ವಾಮೀಜಿ 1986ರಲ್ಲಿ ಅಖಿಲ ಭಾರತ ಮಕ್ಕಳ ಕನ್ನಡ ಸಾಹಿತ್ಯ ಪರಿಷತ್ ಸ್ಥಾಪಿಸಿ, ಮಕ್ಕಳಿಗೆ ಕೃತಿಗಳನ್ನು ರಚನೆ ಮಾಡಲು ಪ್ರೇರೆಪಿಸಿದರು ಎಂದರು.

ಕನ್ನಡ ಭಾಷೆ ಅಮೃತ ಭಾಷೆ, ರಾಜ್ಯದಲ್ಲಿರುವ ಅನ್ಯ ಭಾಷಿಕರಿಗೆ ಕನ್ನಡವನ್ನು ಕಲಿಸಬೇಕು. ಐಎಎಸ್, ಐಪಿಎಸ್ ಸೇರಿದಂತೆ ಕೇಂದ್ರ ಸರ್ಕಾರದ ಹಿರಿಯ ಅಧಿಕಾರಿಗಳು ಕನ್ನಡ ಭಾಷೆ ಕಲಿತು, ಕೆಲಸ ಮಾಡಿದಾಗ ಜನರಿಗೆ ಅನುಕೂಲವಾಗುತ್ತದೆ. ಇತ್ತೀಚೆಗೆ ಕೆಲವು ನ್ಯಾಯಾಲಯದ ತೀರ್ಪುಗಳು ಕನ್ನಡದಲ್ಲಿ ಬರುತ್ತಿವೆ, ಮಂದಿನ ದಿನಗಳಲ್ಲಿ ಎಲ್ಲಾ ಕೋರ್ಟ್ ಗಳ ಆದೇಶ, ತೀರ್ಪುಗಳು ಸ್ಥಳಿಯ ಭಾಷೆಯಲ್ಲಿ ಬರುವಂತೆ ಅಗಬೇಕು ಎಂದು ತಿಳಿಸಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248